# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 524 |
| ಮಾನ್ಯ ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 30.01.2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಸತಿ ಶಾಲೆಗಳು ಮತ್ತು ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕಲ್ಯಾಣ ಕರ್ನಾಟಕದ ಭಾಗದ ಜಿಲ್ಲೆಗಳಲ್ಲಿ 29 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ(1ರಿಂದ 5ನೇ ತರಗತಿ) ಹಾಗೂ 292 ಮೆಟ್ರಿಕ್ ಪೂರ್ವ ಮತ್ತು 163 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ. ಜಿಲ್ಲಾವಾರು ವಿವರವನ್ನು ಅನುಬಂಧ – 1 ರಲ್ಲಿ ನೀಡಿದೆ. |
| ಆ) | ಕಲ್ಯಾಣ ಕರ್ನಾಟಕ ಯಾವ ಯಾವ ಜಿಲ್ಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಸತಿ ನಿಲಯಗಳ ಕೊರತೆ ಇದೆ: (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು) | ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ವಿದ್ಯಾರ್ಥಿನಿಲಯಗಳ ಸಂಖ್ಯೆಗೆ ಅನುಗುಣವಾಗಿ ವಿದ್ಯಾರ್ಥಿಗಳು ದಾಖಲಾಗಿರುವ ಜಿಲ್ಲಾವಾರು ವಿವರಗಳನ್ನು ಅನುಬಂಧ -2 ರಲ್ಲಿ ನೀಡಿದೆ. |
| ಇ) | ಕೆಲವು ಜಿಲ್ಲೆಗಳಲ್ಲಿ ಅಗತ್ಯವಿರುವಷ್ಟು ವಸತಿ ನಿಲಯಗಳು ಇಲ್ಲದಿರುವುದರಿಂದ ಬಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಶಿಕ್ಷಣ ವಂಚಿತರಾಗುತ್ತಿರುವುದನ್ನು ತಪ್ಪಿಸಲು ಹಾಗೂ ವಸತಿ ನಿಲಯಗಳ ಕೊರತೆಗಳನ್ನು ನಿವಾರಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪ.ಜಾತಿ/ಪ.ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.<br><br>ಪ್ರಸ್ತುತ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾಗುವ ವಿದ್ಯಾರ್ಥಿ ನಿಲಯಗಳ |
| ಈ) | ಬಂದಿದ್ದಲ್ಲಿ, ವಸತಿ ನಿಲಯಗಳ ಕೊರತೆಯನ್ನು ನಿವಾರಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಶಿಕ್ಷಣ ಹಕ್ಕು ರಕ್ಷಿಸಲು ಸರ್ಕಾರ ಇದುವರೆಗೆ ಯಾವ ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡಿದೆ? | |

| | | |
|---|---|---|
| | | ಕಟ್ಟಡದ ಸಾಮರ್ಥ್ಯನುಸಾರ (Permissible Strength) ಪ್ರವೇಶಾವಕಾಶ ಕಲ್ಪಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಹೆಚ್ಚುವರಿ ವಿದ್ಯಾರ್ಥಿಗಳನ್ನು ಬಾಡಿಗೆ ಕಟ್ಟಡ ಪಡೆದು ಪ್ರವೇಶಾತಿ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.<br>ಹೊಸದಾಗಿ ವಿದ್ಯಾರ್ಥಿನಿಲಯಗಳ ಮಂಜೂರಾತಿಗಾಗಿ ನಿಗದಿತ ನಮೂನೆಗಳಲ್ಲಿ ಜಿಲ್ಲೆಯ ಸಕ್ಷಮ ಪ್ರಾಧಿಕಾರಿಗಳಾದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಮುಖಾಂತರ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ನಿಯಮಾನುಸಾರ ಮಂಜೂರು ಮಾಡಲು ಕ್ರಮಕೈಗೊಳ್ಳಲಾಗುವುದು. |

**ಸಕಇ 117 ಪಕವಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ (ವಿಧಾನ ಸಭೆಯಿಂದ ಚುನಾಯಿತರಾದವರು) ರವರ ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ: 452(524) ಕ್ಕೆ ಅನುಬಂಧ - 1

| ಕ್ರ. ಸಂ | ಜಿಲ್ಲೆಯ ಹೆಸರು | ವಸತಿ ಶಾಲೆ | ಮೆಟ್ರಿಕ್ ಪೂರ್ವ ವಿ.ನಿಲಯಗಳು | | | ಮೆಟ್ರಿಕ್ ನಂತರ ವಿ.ನಿಲಯಗಳು | | | ದೀನದಯಾಳ್ ಉಪಾಧ್ಯಾಯ | | | ಒಟ್ಟು |
|---|---|---|---|---|---|---|---|---|---|---|---|---|
| | | | ಬಾಲಕ | ಬಾಲಕಿ | ಒಟ್ಟು | ಬಾಲಕ | ಬಾಲಕಿ | ಒಟ್ಟು | ಬಾಲಕ | ಬಾಲಕಿ | ಒಟ್ಟು | |
| 1 | ಬಳ್ಳಾರಿ | 1 | 17 | 5 | 22 | 12 | 6 | 18 | 0 | 0 | 0 | 41 |
| 2 | ಬೀದರ್ | 6 | 34 | 8 | 42 | 12 | 7 | 19 | 0 | 0 | 0 | 67 |
| 3 | ಕಲಬುರಗಿ | 11 | 62 | 10 | 72 | 22 | 14 | 36 | 1 | 1 | 2 | 121 |
| 4 | ಕೊಪ್ಪಳ | 1 | 26 | 7 | 33 | 11 | 7 | 18 | 0 | 0 | 0 | 52 |
| 5 | ರಾಯಚೂರು | 7 | 35 | 11 | 46 | 18 | 13 | 31 | 0 | 0 | 0 | 84 |
| 6 | ವಿಜಯನಗರ | 1 | 29 | 10 | 39 | 17 | 7 | 24 | 0 | 0 | 0 | 64 |
| 7 | ಯಾದಗಿರಿ | 2 | 32 | 6 | 38 | 11 | 4 | 15 | 0 | 0 | 0 | 55 |
| | ಒಟ್ಟು | 29 | 235 | 57 | 292 | 103 | 58 | 161 | 1 | 1 | 2 | 484 |

ಆಯುಕ್ತರ ಪರವಾಗಿ,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ (ವಿಧಾನ ಸಭೆಯಿಂದ ಚುನಾಯಿತರಾದವರು) ರವರ ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ: 452(524) ಕ್ಕೆ ಅನುಬಂಧ - 2**

| ಕ್ರ.ಸಂ | ಜಿಲ್ಲೆಯ ಹೆಸರು | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು | | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು | |
|---|---|---|---|---|---|
| | | ಮಂಜೂರಾತಿ | ದಾಖಲಾತಿ | ಮಂಜೂರಾತಿ | ದಾಖಲಾತಿ |
| 1 | ಬಳ್ಳಾರಿ | 2116 | 3616 | 2036 | 4018 |
| 2 | ಬೀದರ್ | 3300 | 3519 | 1665 | 2120 |
| 3 | ಕಲಬುರಗಿ | 5385 | 5501 | 4415 | 7408 |
| 4 | ಕೊಪ್ಪಳ | 2510 | 4572 | 1657 | 3987 |
| 5 | ರಾಯಚೂರು | 3395 | 6435 | 3433 | 7036 |
| 6 | ವಿಜಯನಗರ | 3904 | 5132 | 2675 | 4297 |
| 7 | ಯಾದಗಿರಿ | 2505 | 2763 | 1385 | 2671 |
| | **ಒಟ್ಟು :** | **23115** | **31538** | **17266** | **31537** |

**ಆಯುಕ್ತರ ಪರವಾಗಿ,**
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು